CC No.3898/2024
CW-7 PW-4

**ಪ್ರಧಾನ ವ್ಯವಹಾರ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಸೊರಬ**

**ಸಿ ಸಿ ನಂ. 3898/2024**

| | |
|---|---|
| **ಹೆಸರು** | **:- ರಮ್ಯಾ ಕೆ ಎಂ** |
| **ಗಂಡನ ಹೆಸರು** | **:- ಉಮೇಶ** |
| **ವಯಸ್ಸು** | **:- 35 ವರ್ಷ** |
| **ಉದ್ಯೋಗ** | **:- ಪಂಚಾಯ್ತಿ ಅಭಿವೃದ್ಧಿ ಅಧಿಕಾರಿ** |
| **ಸ್ಥಳ** | **:- ಸಾಗರ** |

**ದಿನಾಂಕಃ 28.04.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ**

ನಾನು ದಿನಾಂಕಃ 27.10.2023 ರಿಂದ 15.09.2025 ರವರೆಗೆ ಸೊರಬ ತಾಲ್ಲೂಕು ಹೊಸಬಾಳೆ ಗ್ರಾಮ ಪಂಚಾಯ್ತಿಯಲ್ಲಿ ಪಂಚಾಯ್ತಿ ಅಭಿವೃದ್ಧಿ ಅಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ 29.05.2024 ರಂದು ಚಾಸಾ-8 ರವರು ಆರೋಪಿಯ ಮತ್ತು ಕೃತ್ಯ ನಡೆದ ಸ್ಥಳದ ದಾಖಲಾತಿ ಕೋರಿ ನಿವೇದನೆಯನ್ನು ನೀಡಿದ್ದು, ಅದನ್ನು ಸ್ವೀಕರಿಸಿಕೊಂಡಿರುತ್ತೇನೆ. ಸದರಿ ನಿವೇದನೆಯನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅದನ್ನು ನಿಪಿ-12 ಎಂದು ಗುರುತಿಸಲಾಯಿತು. ಆರೋಪಿಗೆ ಸಂಬಂಧಿಸಿದ ಸಿದ್ದಿವಿನಾಯಕ ಜನರಲ್ ಸ್ಟೋರ್ ನ ಬಗ್ಗೆ ದಾಖಲಾತಿಯನ್ನು ಕೋರಿದ್ದು, ಸದರಿ ಕೃತ್ಯ ನಡೆದ ಸ್ಥಳದ ಬಗ್ಗೆ ನಮ್ಮ ಗ್ರಾಮ

ಪಂಚಾಯ್ತಿ ಹೊಸಬಾಳೆಯಲ್ಲಿ ಯಾವುದೇ ದಾಖಲಾತಿಗಳು ಲಭ್ಯವಿರುವುದಿಲ್ಲ ಎಂದು ವರದಿಯನ್ನು ನೀಡಿರುತ್ತೇನೆ. ಸಾಕ್ಷಿಯು ವರದಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ– 13 ಮತ್ತು ಸಾಕ್ಷಿಯ ಸಹಿಯನ್ನು ನಿಪಿ– 13 ಎ ಎಂದು ಗುರುತಿಸಲಾಯಿತು.

**ಮರುವಿಚಾರಣೆ ಇಲ್ಲಃ**

**(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ನನ್ನ ಉಕ್ತಲೇಖನದ ರೀತ್ಯಾ ಕಂಪ್ಯೂಟರೀಕರಿಸಲಾಯ್ತು).**

**ಓ.ಹೇ.ಕೇ. ಸರಿ ಇದೆ ಎಂದು ಒಪ್ಪಿದ್ದಾರೆ.**

**ಪ್ರಧಾನ ವ್ಯವಹಾರ ನ್ಯಾ ಮತ್ತು ಜೆ.ಎಂ.ಎಫ್.ಸಿ**
**ಸೊರಬ.**